(ಆ) ಚುಕ್ಕೆ ಗುರುತಿಲ್ಲದ ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡಲಾದ ಉತ್ತರಗಳು

ಶ್ರೀ ಎಸ್. ಸುರೇಶ್ ಕುಮಾರ್ (ಕಾನೂನು ಹಾಗೂ ಸಂಸದೀಯ ವ್ಯವಹಾರಗಳ ಸಚಿವರು):– ಮಾನ್ಯ ಅಧ್ಯಕ್ಷರೆ, ದಿನಾಂಕ 13.12.2011ರ 6ನೇ ಪಟ್ಟಿಯಿಂದ ಲಿಖಿತ ಮೂಲಕ ಉತ್ತರಿಸುವ 207 ಪ್ರಶ್ನೆಗಳ ಪೈಕಿ 158 ಪ್ರಶ್ನೆಗಳ ಉತ್ತರವನ್ನು ಸದನದಲ್ಲಿ ಮಂಡಿಸುತ್ತಿದ್ದೇನೆ.

ಅಧ್ಯಕ್ಷರು:– ಮಂಡಿಸಲಾಯಿತು. (ಅನುಬಂಧ–1)

2. ಪ್ರಕಟಣೆ

ಸಭಾಧ್ಯಕ್ಷರು :

ವಿಧಾನಸಭಾ ಸದಸ್ಯರಾದ ಶ್ರೀ ಬಸವರಾಜ್ ಪಾಟೀಲ್ ಅಟ್ಟೂರ್ ಅವರು, ಇತ್ತೀಚೆಗೆ ನಡೆದ ರಸ್ತೆ ಅಪಘಾತದಲ್ಲಿ ಗಾಯಗೊಂಡಿರುವ ಪ್ರಯುಕ್ತ, ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವ ಹಿನ್ನೆಲೆಯಲ್ಲಿ, ದಿನಾಂಕ 05.12.2011 ರಿಂದ ನಡೆಯಲಿರುವ ಅಧಿವೇಶನಕ್ಕೆ ಗೈರುಹಾಜರಾಗಲು ಅನುಮತಿಯನ್ನು ಕೋರಿ ಪತ್ರವನ್ನು ನೀಡಿರುತ್ತಾರೆ.

ಮಾನ್ಯ ಸದಸ್ಯರು, ಸದನಕ್ಕೆ ಪ್ರಸ್ತಾಪಿತ ಅವಧಿಯಲ್ಲಿ ಗೈರು ಹಾಜರಾಗಲು ಸಹಮತಿ ಇದೆ ಎಂದು ಭಾವಿಸಲಾಗಿದೆ.

ಶ್ರೀ ಬಸವರಾಜ್ ಪಾಟೀಲ್ ಅಟ್ಟೂರ್ ಅವರು ದಿನಾಂಕ 05.12.2011 ರಿಂದ ನಡೆಯಲಿರುವ ಅಧಿವೇಶನದ ಸಂದರ್ಭದಲ್ಲಿ ಸದನಕ್ಕೆ ಗೈರುಹಾಜರಾಗಲು ಅನುಮತಿ ನೀಡಲಾಗಿದೆ.

3. ವರದಿಯನ್ನೊಪ್ಪಿಸುವುದು

ಶ್ರೀ ಎನ್. ಯೋಗೀಶ್ ಭಟ್ (ವಿಧಾನಸಭೆಯ ಉಪಾಧ್ಯಕ್ಷರು ಹಾಗೂ ಅರ್ಜಿಗಳ ಸಮಿತಿ ಅಧ್ಯಕ್ಷರು):– ಮಾನ್ಯ ಅಧ್ಯಕ್ಷರೆ, 2010–11ನೇ ಸಾಲಿನ ಅರ್ಜಿ ಸಮಿತಿಯ ಹತ್ತನೇ ವರದಿಯನ್ನು ಮಂಡಿಸುತ್ತಿದ್ದೇನೆ.

ಅಧ್ಯಕ್ಷರು:– ಮಂಡಿಸಲಾಯಿತು.